03 OCT 2023

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಹಿಂದುಳಿದ ವರ್ಗಗಳ ಫಲಾನುಭವಿಗಳಿಗೆ ಸ್ವಯಂ ಉದ್ಯೋಗಕ್ಕೆ/ಆರ್ಥಿಕ ಚಟುವಟಿಕೆ ಕೈಗೊಳ್ಳಲು ರೂ.2.00ಲಕ್ಷಗಳವರೆಗೆ ಸಾಲ ಸೌಲಭ್ಯವನ್ನು ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ಒದಗಿಸುವ ಕುರಿತು.

| | |
|---|---|
| ವ್ಯ.ನಿ. | ಪ್ರವ್ಯ-1 |
| ಸ.ಪ್ರವ್ಯ | ಪ್ರವ್ಯ-2 |

**ಪ್ರಸ್ತಾವನೆ,**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಡಿ ಬರುವ ವಿವಿಧ ನಿಗಮಗಳಲ್ಲಿ ಹಿಂದುಳಿದ ವರ್ಗಗಳ ಫಲಾನುಭವಿಗಳು ಸ್ವಯಂ ಉದ್ಯೋಗ/ಆರ್ಥಿಕ ಚಟುವಟಿಕೆ ಕೈಗೊಳ್ಳಲು ಹಾಲಿ ನೀಡಲಾಗುತ್ತಿರುವ ರೂ.50,000/-ಗಳ ನೇರ ಸಾಲ ಯೋಜನೆಯ ಮೊತ್ತವು ಕಡಿಮೆ ಇದ್ದು, ಸದರಿ ಸಾಲದ ಮೊತ್ತದಲ್ಲಿ ಪೂರ್ಣ ಪ್ರಮಾಣದಲ್ಲಿ ಸ್ವಯಂ ಉದ್ಯೋಗ/ಆರ್ಥಿಕ ಚಟುವಟಿಕೆ ಕೈಗೊಳ್ಳಲು ಸಾಧ್ಯವಾಗುತ್ತಿರುವುದಿಲ್ಲ. ಆದ್ದರಿಂದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯ ಸಾಲದ ಮೊತ್ತವನ್ನು ರೂ.50,000/- ಗಳಿಂದ ರೂ.2,00,000/-ಗಳಿಗೆ ಹೆಚ್ಚಿಸುವಂತೆ ವಿವಿಧ ಸಮುದಾಯಗಳ ಒಕ್ಕೂಟಗಳು/ಜನಪ್ರತಿನಿಧಿಗಳು/ಸಾರ್ವಜನಿಕರು ಹಾಗೂ ಇತರರಿಂದ ಮನವಿಗಳು ಸ್ವೀಕೃತವಾಗುತ್ತಿರುವುದರಿಂದ ಹಿಂದುಳಿದ ವರ್ಗಗಳ ಫಲಾನುಭವಿಗಳು ಪರಿಣಾಮಕಾರಿಯಾಗಿ ಸ್ವಯಂ ಉದ್ಯೋಗ/ಆರ್ಥಿಕ ಚಟುವಟಿಕೆ ಕೈಗೊಳ್ಳಲು ಅನುಕೂಲವಾಗುವಂತೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ನಿಗಮಗಳ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯ ಸಾಲದ ಮೊತ್ತವನ್ನು ರೂ.50,000/-ಗಳಿಂದ ರೂ.2,00,000/- ಗಳಿಗೆ ಹೆಚ್ಚಿಸಲು ತೀರ್ಮಾನಿಸಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯ ಪರಿಷ್ಕೃತ ಮಾರ್ಗಸೂಚಿಗಳನ್ನು ಜಾರಿಗೊಳಿಸಲು ತೀರ್ಮಾನಿಸಲಾಗಿದೆ. ಅದರಂತೆ ಈ ಆದೇಶ.

ಸಂಖ್ಯೆ 171
ದಿನಾಂಕ 4-10-23
ಬೆಂಗಳೂರು-52.

**ಸರ್ಕಾರದ ಆದೇಶ ಸಂಖ್ಯೆ:ಹಿಂವಕ 370 ಬಿಎಂಎಸ್ 2023, ಬೆಂಗಳೂರು**
**ದಿನಾಂಕ:26.09.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಡಿ ಬರುವ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ/ಆರ್ಥಿಕ ಚಟುವಟಿಕೆ ಕೈಗೊಳ್ಳಲು ಪ್ರಸ್ತುತ ನೀಡಲಾಗುತ್ತಿರುವ ರೂ.50,000/-ಗಳ ನೇರ ಸಾಲ ಯೋಜನೆಯ ಮೊತ್ತವನ್ನು ರೂ.2,00,000/- (ಎರಡು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ ಹೆಚ್ಚಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲು ಈ ಕೆಳಕಂಡ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಆದೇಶಿಸಿದೆ.

**ಮಾರ್ಗಸೂಚಿಗಳು**

**1. ಯೋಜನೆ ಉದ್ದೇಶ:-** ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದ ನಿರುದ್ಯೋಗಿ ಫಲಾನುಭವಿಗಳು ಕೃಷಿ ಅವಲಂಬಿತ ಚಟುವಟಿಕೆಗಳು, ವ್ಯಾಪಾರ, ಕೈಗಾರಿಕೆ, ಸಾರಿಗೆ ಮತ್ತು ಸೇವಾ ವಲಯದಲ್ಲಿ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಸಾಲದ ನೆರವು ನೀಡುವುದು.

**2. ಅರ್ಹತೆಗಳು:**

1. ಈ ಯೋಜನೆಯಲ್ಲಿ ಆರ್ಥಿಕ ಸಹಾಯ ಪಡೆಯಲು ಅಭ್ಯರ್ಥಿಯು ಸರ್ಕಾರದ ಆದೇಶ ಸಂಖ್ಯೆ ಸಕಇ 225 ಬಿಸಿಎ 2000, ದಿನಾಂಕ 30/03/2002 ರಲ್ಲಿ ಗುರುತಿಸಿದ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು.
2. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದವರಾದರೆ ರೂ.98,000/ಗಳು ಹಾಗೂ ನಗರ ಪ್ರದೇಶದವರಿಗೆ ರೂ.1,20,000/-ಗಳನ್ನು ಮೀರಿರಬಾರದು.

26/9/23

3. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
4. ಅರ್ಜಿದಾರರ ವಯಸ್ಸು ಕನಿಷ್ಠ 18 ವರ್ಷಗಳು ಹಾಗೂ ಗರಿಷ್ಠ 55 ವರ್ಷಗಳ ಮಿತಿಯೊಳಗಿರಬೇಕು.
5. ಪ್ರವರ್ಗ-1 ರಡಿಯಲ್ಲಿನ ಜಾತಿಗಳಲ್ಲಿ ಬರುವ ಅರ್ಜಿದಾರರು ಕನಿಷ್ಠ 7ನೇ ತರಗತಿ ಹಾಗೂ ಉಳಿದ ಇತರೆ ಪ್ರವರ್ಗಗಳಲ್ಲಿನ ಅರ್ಜಿದಾರರು 10ನೇ ತರಗತಿ ವಿದ್ಯಾರ್ಹತೆ ಹೊಂದಿರಬೇಕು ಹಾಗೂ ನಿರುದ್ಯೋಗಿಯಾಗಿರಬೇಕು.
6. ಸರ್ಕಾರದ/ನಿಗಮದ ಬೇರೆ ಯಾವುದಾದರೂ ಯೋಜನೆಗಳಲ್ಲಿ ಸಾಲ ಅಥವಾ ಇತರ ಆರ್ಥಿಕ ಸವಲತ್ತು ಪಡೆದಿರಬಾರದು.
7. ಮಹಿಳೆಯರಿಗೆ ಈ ಯೋಜನೆಯಲ್ಲಿ ಶೇ.50ರಷ್ಟು ಮೀಸಲು ನಿಗದಿಪಡಿಸಿದೆ.
8. ಅಂಗವಿಕಲರಿಗೆ ಈ ಯೋಜನೆಯಲ್ಲಿ ಶೇ.4ರಷ್ಟು ಮೀಸಲು ನಿಗದಿಪಡಿಸಿದೆ.
9. ಒಂದು ಕುಟುಂಬದ ಒಬ್ಬ ಸದಸ್ಯರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು.
10. ಅಭ್ಯರ್ಥಿಯು ಕೈಗೊಳ್ಳುವ ಆರ್ಥಿಕ ಚಟುವಟಿಕೆಯ ಬಗ್ಗೆ ತರಬೇತಿ/ ಅನುಭವ/ ತಿಳುವಳಿಕೆ ಹೊಂದಿರಬೇಕು.

**3. ಘಟಕ ವೆಚ್ಚ/ಸಾಲದ ಮೊತ್ತ:**

ಹಿಂದುಳಿದ ವರ್ಗಗಳ ನಿರುದ್ಯೋಗಿ ಫಲಾನುಭವಿಗಳು ಕೈಗೊಳ್ಳುವ ಸ್ವಯಂ ಉದ್ಯೋಗ/ ಆರ್ಥಿಕ ಚಟುವಟಿಕೆಗಳ ಅನುಸಾರ ಈ ಕೆಳಕಂಡಂತೆ ಸಾಲ ಮತ್ತು ಸಹಾಧನ ಸೌಲಭ್ಯವನ್ನು ಒದಗಿಸಲಾಗುವುದು.

1. ಘಟಕ ವೆಚ್ಚ ರೂ.1,00,000/- ಲಕ್ಷಗಳಿಗೆ ಶೇ.20 ರಷ್ಟು ಗರಿಷ್ಠ ರೂ.20,000/- ಗಳ ಸಹಾಯಧನ ಉಳಿಕೆ ಶೇ.80 ರಷ್ಟು ರೂ.80,000/- ಗಳಿಗೆ ವಾರ್ಷಿಕ ಶೇ.4 ರ ಬಡ್ಡಿದರದಲ್ಲಿ ಸಾಲ.
2. ಘಟಕ ವೆಚ್ಚ ರೂ.1,00,001/- ರಿಂದ ರೂ.2.00 ಲಕ್ಷಗಳವರೆಗೆ ಶೇ.15 ರಷ್ಟು ಗರಿಷ್ಠ ರೂ.30,000/- ಗಳ ಸಹಾಯಧನ ಉಳಿಕೆ ಶೇ.85 ರಷ್ಟು ರೂ.1,70,000/- ಗಳಿಗೆ ವಾರ್ಷಿಕ ಶೇ.4 ರ ಬಡ್ಡಿದರದಲ್ಲಿ ಸಾಲ.

ಫಲಾನುಭವಿಯು ಒಂದು ಬಾರಿ ಸಾಲ ಪಡೆದು, ಪಡೆದ ಸಾಲವನ್ನು ನಿಗದಿತ ಅವಧಿಯೊಳಗೆ ಸಂಪೂರ್ಣವಾಗಿ ಮರು ಪಾವತಿಸಿದಲ್ಲಿ ಅಂತಹ ಫಲಾನುಭವಿಗಳಿಗೆ ಒಂದು ಬಾರಿಗೆ ಮಾತ್ರ ದುಪ್ಪಟ್ಟು ಸಾಲವನ್ನು ಗರಿಷ್ಠ ರೂ.2.00 ಲಕ್ಷಗಳವರೆಗೆ ಯಾವುದೇ ಸಹಾಯಧನವಿಲ್ಲದೇ ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ನೀಡಲು ಅವಕಾಶ ಕಲ್ಪಿಸುವುದು.

**ಫಲಾನುಭವಿಗಳ ಆಯ್ಕೆ ಮತ್ತು ಯೋಜನೆಗಳ ಅನುಷ್ಠಾನ:-**

ಸರ್ಕಾರದ ಆದೇಶ ಸಂಖ್ಯೆ: ಹಿಂವಕ/31/ಸಮನ್ವಯ/2013, ದಿನಾಂಕ:25/02/2013 ರಲ್ಲಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿ ಮೂಲಕ ಈ ಯೋಜನೆಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವುದು.

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ಮಾನ್ಯ ಶಾಸಕರ ಅಧ್ಯಕ್ಷತೆಯ ಸಮಿತಿ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡುವುದು.

**4. ಆಯ್ಕೆ ಸಮಿತಿಯ ಕರ್ತವ್ಯಗಳು:**

1. ಅರ್ಜಿದಾರರು ಆನ್‌ಲೈನ್ ಮುಖಾಂತರ ಸಲ್ಲಿಸಿರುವ ಅರ್ಜಿಗಳನ್ನು ಜಿಲ್ಲಾ ವ್ಯವಸ್ಥಾಪಕರು ನಿಯಮಗಳನ್ವಯ ಪರಿಶೀಲಿಸಿ ಅಗತ್ಯ ಎಲ್ಲಾ ದಾಖಲಾತಿಗಳನ್ನು ಒದಗಿಸಿರುವ ಬಗ್ಗೆ ದೃಢೀಕರಿಸಿಕೊಂಡು ಅಂತಹ ಅರ್ಜಿಗಳನ್ನು ಆಯ್ಕೆ ಸಮಿತಿ ಮುಂದೆ ಮಂಡಿಸಬೇಕು.
2. ಆಯ್ಕೆ ಸಮಿತಿಯು ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು. ನಿಗಮದ ಜಿಲ್ಲಾ ವ್ಯವಸ್ಥಾಪಕರು ಆಯ್ಕೆ ಪಟ್ಟಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ಸಾಲ ಮಂಜೂರಾತಿಗಾಗಿ ವಿಶ್ವಾಸ್ ಪೋರ್ಟಲ್ ಮುಖಾಂತರ ವ್ಯವಸ್ಥಾಪಕ ನಿರ್ದೇಶಕರ ಲಾಗಿನ್‌ಗೆ ಸಲ್ಲಿಸುವುದು.

26/9/23 ...3

**5. ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು:-** ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ ಈ ಅಗತ್ಯ ದಾಖಲೆಗಳನ್ನು ಹೊಂದಿರಬೇಕಾಗಿರುತ್ತದೆ.

1. ಹಿಂದುಳಿದ ವರ್ಗಗಳಿಗೆ ಸೇರಿರುವುದಕ್ಕೆ ಸಂಬಂಧಿಸಿದ ತಾಲ್ಲೂಕು ತಹಶಿಲ್ದಾರ್ ರಿಂದ ನಿಗದಿತ ನಮೂನೆಯಲ್ಲಿ ಪಡೆದ ಜಾತಿ/ಕುಟುಂಬದ ವಾರ್ಷಿಕ ಆದಾಯ ಪ್ರಮಾಣ ಪತ್ರ,
2. ಅರ್ಜಿದಾರರು ನಿಗಧಿತ ವಿದ್ಯಾರ್ಹತೆ ಹೊಂದಿರುವ ಬಗ್ಗೆ ಅಂಕಪಟ್ಟಿ/ದಾಖಲೆಗಳು .
3. ಅರ್ಜಿದಾರರ ವಾಸದ ಪುರಾವೆಗಾಗಿ ಸಕ್ಷಮ ಪ್ರಾಧಿಕಾರಿಗಳು ನೀಡಿದ ಪಡಿತರ ಚೀಟಿ/ಚುನಾವಣಾ ಗುರುತಿನ ಚೀಟಿ/ಆಧಾರ ಕಾರ್ಡ್.
4. ಅರ್ಜಿದಾರರ ಪಾಸ್ ಪೋರ್ಟ್ ಅಳತೆಯ ಇತ್ತೀಚಿನ ಫೋಟೋ.
5. ಅರ್ಜಿದಾರರು ಕಡ್ಡಾಯವಾಗಿ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಉಳಿತಾಯ ಖಾತೆ ಹೊಂದಿರಬೇಕು ಸದರಿ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಮಾಡಿರಬೇಕು.
6. ಅರ್ಜಿದಾರರು ಕೈಗೊಳ್ಳುವ ಆರ್ಥಿಕ ಚಟುವಟಿಕೆಯ ಅನುಭವ/ತರಬೇತಿ ಬಗ್ಗೆ ಪ್ರಮಾಣ ಪತ್ರ/ಸ್ವಯಂ ಘೋಷಣೆ ಪತ್ರ.

**ಸಾಲದ ಮೊತ್ತವನ್ನು ನೇರ ನಗದು ಮೂಲಕ ಬಿಡುಗಡೆ ಮಾಡುವ ಪೂರ್ವದಲ್ಲಿ ಆಯ್ಕೆಯಾದ ಫಲಾನುಭವಿಗಳಿಂದ ಪಡೆಯಬೇಕಾದ ದಾಖಲಾತಿಗಳು.**

1. ಸಾಲದ ಭದ್ರತೆಗೆ ಸಾಲದ ಮೊತ್ತದಷ್ಟು ಮೌಲ್ಯವಿರುವ ಅರ್ಜಿದಾರರು/ಜಾಮೀನುದಾರರ ಸ್ಥಿರಾಸ್ತಿಯನ್ನು ನಿಗಮದ ಹೆಸರಿಗೆ ಆಧಾರ ಮಾಡಿಕೊಡಬೇಕು. (ಸರಳ ನೋಂದಾಯಿತ ಅಡಮಾನ ಪತ್ರದ ಮೂಲಕ / Simple Registered Mortgage Deed).
2. ಸಾಲದ ಭದ್ರತೆಗೆ ಅರ್ಜಿದಾರರು/ಜಾಮೀನುದಾರರು ನೀಡುವ ಸ್ಥಿರಾಸ್ತಿಗೆ ಸಂಬಂಧಿಸಿದಂತೆ ಈ ಕೆಳಕಂಡ ಮೂಲ ದಾಖಲಾತಿಗಳನ್ನು ಪರಿಶೀಲನೆಗೆ ಒದಗಿಸಬೇಕು.

- ಸಾಲದ ಭದ್ರತೆಗೆ ನೀಡುವ ಸ್ಥಿರಾಸ್ತಿಯ ಮೂಲ ಪತ್ರ.
- ಮ್ಯೂಟೇಷನ್ ರಿಜಿಸ್ಟರ್ ಎಕ್ಸ್‌ಟ್ರಾಕ್ಟ್.
- ಪಿತ್ರಾರ್ಜಿತ ಆಸ್ತಿಯಾಗಿದ್ದಲ್ಲಿ: (1) ಆಸ್ತಿ ವಿಭಾಗ ಪತ್ರ (2) ಎಂ.ಆರ್.ಕಾಪಿ. ಜಮೀನು ಆಗಿದ್ದಲ್ಲಿ ಚಾಲ್ತಿ ವರ್ಷದ ಪಹಣಿ ಪತ್ರ.
- ಚಾಲ್ತಿ ವರ್ಷದವರೆಗೆ ಕಂದಾಯ ಪಾವತಿಸಿದ ರಶೀದಿ.
- ಖಾತಾ ಎಕ್ಸ್‌ಟ್ರಾಕ್ಟ್ ಮತ್ತು ಪಟ್ಟಾಪುಸ್ತಕ.
- ಸ್ಥಿರಾಸ್ತಿಯ ಚೆಕ್ಕು ಬಂದಿ.
- ಇ.ಸಿ. (13 ವರ್ಷಗಳದ್ದು) ನಮೂನೆ-15ರಲ್ಲಿ
- ಉಪನೋಂದಣಾಧಿಕಾರಿಗಳಿಂದ ಪಡೆದ ಸ್ಥಿರಾಸ್ತಿಯ ಮೌಲ್ಯ ನಿರ್ಣಯ ವರದಿ.
- (ಮೇಲ್ಕಂಡ ಮೂಲ ದಾಖಲೆಗಳನ್ನು ಪರಿಶೀಲನೆ ನಂತರ ಫಲಾನುಭವಿಗಳಿಗೆ ಹಿಂದಿರುಗಿಸುವುದು ಹಾಗೂ ಅವುಗಳ ಜೆರಾಕ್ಸ್ ಪ್ರತಿಯನ್ನು ದೃಢೀಕರಿಸಿ ನಿಗಮದ ಕಛೇರಿಯಲ್ಲಿ ಕಡತಗೊಳಿಸುವುದು).
- ಜಾಮೀನುದಾರರ ಒಪ್ಪಿಗೆ ಪತ್ರ (ನೋಟರಿ ಮಾಡಿಸಿರಬೇಕು).
- ಅರ್ಜಿದಾರರ ವಂಶವೃಕ್ಷ (ವಂಶವೃಕ್ಷದಲ್ಲಿ ತೋರಿಸಿರುವ ಕಾನೂನು ಬದ್ಧ ಹಕ್ಕುದಾರರಿಂದ ಆಸ್ತಿಯನ್ನು ನಿಗಮಕ್ಕೆ ಆಧಾರ ಮಾಡುವ ಬಗ್ಗೆ ಒಪ್ಪಿಗೆ ಪತ್ರ (ನೋಟರಿ ಮಾಡಿಸಿರಬೇಕು) ಅರ್ಜಿದಾರರ ಹಾಗೂ ಜಾಮೀನುದಾರರ ಆಸ್ತಿ ಮತ್ತು ಋಣಭಾರಗಳ ಘೋಷಣಾ ಪತ್ರ (ನಿಗದಿತ ನಮೂನೆಯಲ್ಲಿ).

3. ಅರ್ಜಿದಾರರು ಉದ್ಯಮ ಸ್ಥಾಪಿಸಲು ಅವಶ್ಯವಿರುವ ಯಂತ್ರೋಪಕರಣಗಳನ್ನು ಕೊಂಡುಕೊಳ್ಳಲು ಸರಬರಾಜುದಾರರಿಂದ ಪಡೆದ Invoice ಮತ್ತು ಯೋಜನಾ ವರದಿ.
4. ಅರ್ಜಿ ಸಲ್ಲಿಸುವ ಪ್ರತಿಯೊಬ್ಬ ಫಲಾನುಭವಿಯು ಫಲಾನುಭವಿಗೆ ಸಾಲ ಮಂಜೂರು ಮಾಡುವ ಮುನ್ನ ಕಡ್ಡಾಯವಾಗಿ ಸೀಡಾಕ್ (CEDOK) ಅಥವಾ ತತ್ಸಮಾನ ಸರ್ಕಾರಿ ಸಂಸ್ಥೆಗಳ ಮುಖಾಂತರ ಉದ್ಯಮ ಶೀಲತಾ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ತರಬೇತಿ ಪಡೆದಿರಬೇಕು ಹಾಗೂ ಅರ್ಜಿಯೊಂದಿಗೆ ತರಬೇತಿ ಪ್ರಮಾಣ ಪತ್ರ ಲಗತ್ತಿಸುವುದು.
5. ಸಾರಿಗೆ ಉದ್ದೇಶಕ್ಕಾಗಿ ಸಾಲ ಬಯಸಿದಲ್ಲಿ ಅರ್ಜಿದಾರರು ಡ್ರೈವಿಂಗ್ ಲೈಸೆನ್ಸ್ ಮತ್ತು ಬ್ಯಾಡ್ಜ್

...4

**6. ಸಾಲ ಮಂಜೂರಾತಿಯ ವಿಧಾನ:-**

a. ನಿಗಮದ ಕೇಂದ್ರ ಕಚೇರಿಯಿಂದ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಿ ಜಾಹಿರಾತು ನೀಡುವುದು.

b. ಜಿಲ್ಲಾ ವ್ಯವಸ್ಥಾಪಕರು ವಿಶ್ವಾಸ್ ಪೋರ್ಟಲ್ ಮುಖಾಂತರ ಸ್ವೀಕೃತವಾದ ಅರ್ಹ ಅರ್ಜಿಗಳನ್ನು ಪರಿಶೀಲಿಸುವುದು ಹಾಗೂ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಗೆ ಮಂಡಿಸುವುದು.

c. ಆಯ್ಕೆ ಸಮಿತಿಯು ಅರ್ಜಿದಾರರು ಕೈಗೊಳ್ಳುವ ಉದ್ದೇಶದ ಲಾಭದಾಯಕತೆ ಮತ್ತು ಸಮಂಜಸತೆ, ಅನುಭವ, ಮರುಪಾವತಿ ಇಚ್ಛಾಶಕ್ತಿ, ಸಾಲದ ಭದ್ರತೆಗೆ ಒದಗಿಸಿರುವ ದಾಖಲೆಗಳನ್ನು ಆಧರಿಸಿ ಅರ್ಹ ಫಲಾನುಭವಿಗಳನ್ನು ನಿಗದಿಪಡಿಸಿದ ಗುರಿಗೆ ಅನುಗುಣವಾಗಿ ಆಯ್ಕೆ ಮಾಡುವುದು.

d. ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಫಲಾನುಭವಿಗಳಿಗೆ ಸಂಬಂಧಿಸಿದಂತೆ, ಪ್ರವರ್ಗ-1 ಮತ್ತು 2ಎ ರಲ್ಲಿನ ಶೇ.90 ಹಾಗೂ 3ಎ ಮತ್ತು 3ಬಿ ರಲ್ಲಿನ ಶೇ.10ರ ಪ್ರಮಾಣದನ್ವಯ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು. ಇತರೆ ಅಭಿವೃದ್ಧಿ ನಿಗಮಗಳ ಫಲಾನುಭವಿಗಳ ಆಯ್ಕೆ ಸಮಯದಲ್ಲಿ ಶೇ. 100 ರಷ್ಟು ನಿಗಮದ ವ್ಯಾಪ್ತಿಯಲ್ಲಿನ ಸಮುದಾಯಗಳ/ಜಾತಿಯ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು.

e. ಆಯ್ಕೆ ಸಮಿತಿಯಿಂದ ಆಯ್ಕೆಯಾದ ಫಲಾನುಭವಿಗಳಿಂದ ಸಾಲದ ಭದ್ರತೆಗೆ ಪಡೆದ ಸ್ಥಿರಾಸ್ತಿಯ ದಾಖಲೆಗಳನ್ನು ಇತರ ದಾಖಲೆಗಳೊಂದಿಗೆ ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾ ವ್ಯವಸ್ಥಾಪಕರು ವಿಶ್ವಾಸ್ ಪೋರ್ಟಲ್ ಮುಖಾಂತರ ವ್ಯವಸ್ಥಾಪಕ ನಿರ್ದೇಶಕರ ಲಾಗಿನ್‌ಗೆ ಕಳುಹಿಸುವುದು.

f. ಜಿಲ್ಲಾ ವ್ಯವಸ್ಥಾಪಕರು ವಿಶ್ವಾಸ್ ಪೋರ್ಟಲ್‌ನಲ್ಲಿ ವರ್ಗಾಯಿಸಿರುವ ದಾಖಲಾತಿಗಳನ್ನು ವ್ಯವಸ್ಥಾಪಕ ನಿರ್ದೇಶಕರು ಪರಿಶೀಲಿಸಿ ಸಾಲ ಮಂಜೂರಾತಿಗೆ ಆಡಳಿತಾತ್ಮಕ ಮಂಜೂರಾತಿ ಆದೇಶ ನೀಡುವುದು.

g. ವ್ಯವಸ್ಥಾಪಕ ನಿರ್ದೇಶಕರು ಆಯ್ಕೆಯಾದ ಫಲಾನುಭವಿಗಳಿಗೆ ಸಾಲದ ಮೊತ್ತವನ್ನು ನೇರ ನಗದು ವರ್ಗಾವಣೆ ಮಾಡುವುದು.

h. ಅರ್ಜಿದಾರರು ಸ್ಥಾಪಿಸುವ ಉದ್ಯಮಕ್ಕೆ ಸಂಬಂಧಿತ ಪ್ರಾಧಿಕಾರದಿಂದ ಅಗತ್ಯ ಟ್ರೇಡ್ ಲೈಸನ್ಸ್ ಹಾಗೂ ಪರವಾನಗಿಯನ್ನು ಸಾಲ ಮಂಜೂರಾದ ಮೂರು ತಿಂಗಳೊಳಗೆ ಪಡೆದುಕೊಳ್ಳತಕ್ಕದ್ದು, ಹಾಗೂ ಸದರಿ ದಾಖಲಾತಿಯನ್ನು ಜಿಲ್ಲಾ ವ್ಯವಸ್ಥಾಪಕರ ಕಛೇರಿಗೆ ಸಲ್ಲಿಸತಕ್ಕದ್ದು.

i. ಜಿಲ್ಲಾ ವ್ಯವಸ್ಥಾಪಕರು ಸಾಲ ಬಿಡುಗಡೆಯಾದ ಫಲಾನುಭವಿಗಳಿಂದ/ಜಾಮೀನುದಾರರಿಂದ ನಿಗದಿತ ನಮೂನೆಯಲ್ಲಿ ಭದ್ರತಾ ದಾಖಲೆಗಳಿಗೆ ಸಹಿಮಾಡಿಸಿಕೊಂಡು, ದಾಖಲಾತಿಗಳನ್ನು ಸಂರಕ್ಷಿಸಿಡಬೇಕು.

j. ಸಾಲದ ಮೊತ್ತವು ಉದ್ಯಮ ಸ್ಥಾಪನೆಗೆ/ಯಂತ್ರೋಪಕರಣಗಳ ವೆಚ್ಚಕ್ಕೆ ಕಡಿಮೆ ಇದ್ದಲ್ಲಿ ಹೆಚ್ಚುವರಿ ಮೊತ್ತವನ್ನು ಫಲಾನುಭವಿಯೇ ಭರಿಸತಕ್ಕದ್ದು.

k. ಸಾಲದ ಮೊತ್ತದಿಂದ ಫಲಾನುಭವಿ ಉದ್ದೇಶಿತ ಉದ್ಯಮ ಸ್ಥಾಪಿಸಿ ಸದುಪಯೋಗ ಪಡಿಸಿಕೊಂಡಿರುವ ಬಗ್ಗೆ **ಸಹಾಯಕ ಅಭಿವೃದ್ಧಿ ಅಧಿಕಾರಿಗಳು** ಖಾತ್ರಿಪಡಿಸಿಕೊಳ್ಳುವುದು.

**7. ಮರುಪಾವತಿ ಅವಧಿ:-**

ಈ ಯೋಜನೆಯಲ್ಲಿ ಪಡೆದ ಸಾಲವನ್ನು ಫಲಾನುಭವಿ ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ 60 (5 ವರ್ಷಗಳು) ಕಂತುಗಳಲ್ಲಿ ಮರುಪಾವತಿಸಬೇಕು. ಇದರಲ್ಲಿ 3 ತಿಂಗಳ ವಿರಮಾವಧಿ ಇರುತ್ತದೆ.

**8. ಡಿ.ಸಿ.ಬಿ ತಯಾರಿಸಿ ಸಾಲ ವಸೂಲಾತಿಗೆ ಕ್ರಮ:-**

a. ಸಾಲ ಮಂಜೂರಾತಿ ಆದೇಶದಲ್ಲಿ ನಿಗದಿಪಡಿಸಿದ ಕಂತುಗಳನ್ವಯ ಅಸಲು ಮತ್ತು ಬಡ್ಡಿಯನ್ನು ಪ್ರತಿ ತಿಂಗಳು 5ನೇ ತಾರೀಖಿನೊಳಗೆ ವಿಶ್ವಾಸ್ ಪೋರ್ಟಲ್ ಮುಖಾಂತರ ಮರುಪಾವತಿಸಬೇಕು. ವಿಳಂಬದ ಅವಧಿಗೆ ಶೇ.2ರಷ್ಟು ಸುಸ್ತಿ ಬಡ್ಡಿಯನ್ನು ವಿಧಿಸಿ ವಸೂಲಿ ಮಾಡಬೇಕು.

b. ಸಾಲ ಮರುಪಾವತಿಸದೆ ಸುಸ್ತಿಯಾದ ಫಲಾನುಭವಿಗಳಿಗೆ ನಿಯಮಾನುಸಾರ ಕಾನೂನು ಕ್ರಮ ಜರುಗಿಸಿ ಸಾಲ ವಸೂಲಾತಿಗೆ ಅಗತ್ಯ ಕ್ರಮವಹಿಸುವುದು.

...5

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 684 ವೆಚ್ಚ-3/2023, ದಿನಾಂಕ:06.09.2023 ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

V. Akkamahadevi 26/9/23

**(ವಿ.ಅಕ್ಕಮಹಾದೇವಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

26.09.23

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ(ನಿ), ಬೆಂಗಳೂರು
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ(ನಿ), ಬೆಂಗಳೂರು
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ,ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
9. ನಿರ್ದೇಶಕರು, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ (ನಿ) ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ (ನಿ)ಬೆಂಗಳೂರು.
12. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮ(ನಿ) ಬೆಂಗಳೂರು .
13. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:-

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ .